ಮಾಧ್ಯಮ ಮಾಹಿತಿ:

ಜನವರಿ 2 ರಂದು ಬಿಬಿಎಂಪಿ ವ್ಯಾಪ್ತಿಯ 2 ಆರೋಗ್ಯ ಕೇಂದ್ರ ಹಾಗೂ ಬೆಂಗಳೂರು ನಗರ ಹೊರವಲಯ ವ್ಯಾಪ್ತಿಯ 1 ಕೇಂದ್ರದಲ್ಲಿ ಲಸಿಕಾ ತಾಲಿಮು ನಡೆಯಲಿದೆ: ಮಾನ್ಯ ಆಡಳಿತಗಾರರು.

ದೇಶದಲ್ಲಿ ಲಸಿಕೆ ವಿತರಣೆ ಮಾಡುವ ಸಂಬಂಧ ಜನವರಿ 2 ರಂದು ಎಲ್ಲಾ ರಾಜ್ಯಗಳಲ್ಲಿಯೂ ಕೊರೋನಾ ನಿಯಂತ್ರಣ ಲಸಿಕೆಯ ತಾಲೀಮು(Dry Run) ನಡೆಯಲಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಲಸಿಕೆ ತಾಲೀಮು ನಡೆಸಲು ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಲಸಿಕೆ ತಾಲೀಮು ನಡೆಸುವ ಬಗ್ಗೆ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗೆ ಇಂದು ತರಬೇತಿ ಕಾರ್ಯ ನಡೆಯಲಿದೆ ಎಂದು ಮಾನ್ಯ ಆಡಳಿತಗಾರರು ಶ್ರೀ ಗೌರವ್ ಗುಪ್ತಾ ರವರು ತಿಳಿಸಿದರು.

ಪಾಲಿಕೆ ವ್ಯಾಪ್ತಿಯ 2 ಕಡೆ ದಕ್ಷಿಣ ವಲಯದ ವಿದ್ಯಾಪೀಠದಲ್ಲಿರುವ ಸಾರ್ವಜನಿಕ ಆರೋಗ್ಯ ಕೇಂದ್ರ, ಪಶ್ಚಿಮ ವಲಯದ ಕಾಮಾಕ್ಷಿಪಾಳ್ಯದಲ್ಲಿರುವ ಸಾರ್ವಜನಿಕ ಆರೋಗ್ಯ ಕೇಂದ್ರ ಹಾಗೂ ಬೆಂಗಳೂರು ನಗರ ಗ್ರಾಮಾಂತರ ಅನೇಕಲ್ ಭಾಗದ ಹರ್ಗಾದೆಯಲ್ಲಿರುವ ಸಾರ್ವಜನಿಕ ಆರೋಗ್ಯ ಕೇಂದ್ರದಲ್ಲಿ ಲಸಿಕೆ ತಾಲೀಮು ನಡೆಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ.

ಎರಡು ತಾಸು ಲಸಿಕೆ ತಾಲೀಮು ನಡೆಯಲಿದ್ದು, ಪ್ರತಿ ಸಾರ್ವಜನಿಕ ಆರೋಗ್ಯ ಕೇಂದ್ರದಲ್ಲಿ 25 ಮಂದಿ ಆರೋಗ್ಯ ಕಾರ್ಯಕರ್ತರನ್ನು ಗುರುತಿಸಲಾಗಿದ್ದು, 3 ಸಾರ್ವಜನಿಕ ಆರೋಗ್ಯ ಕೇಂದ್ರಗಳಿಂದ 75 ಕಾರ್ಯಕರ್ತರಿಗೆ ಲಸಿಕೆ ತಾಲೀಮು ನಡೆಸಲಾಗುತ್ತದೆ. ತಾಲೀಮು ನಡೆಸಿರುವ ಬಗ್ಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಲಾಗುತ್ತದೆ. ಲಸಿಕೆ ನೀಡಲು ನಗರದಲ್ಲಿ ಒಟ್ಟು 1,517 ಆರೋಗ್ಯ ಕೇಂದ್ರಗಳನ್ನು ಗುರುತಿಸಲಾಗಿದ್ದು, ಜನವರಿ ಅಂತ್ಯ/ಫೆಬ್ರುವರಿ ಮೊದಲ ವಾರದಲ್ಲಿ ಲಸಿಕೆ ನೀಡುವ ಕಾರ್ಯ ಪ್ರಾರಂಭಿಸಲು ಯೋಜಿಸಿದೆ.